**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.20/2021**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಅಬಕಾರಿ ಪೊಲೀಸ್

-ಃಃ ವಿರುದ್ದ ಃಃ-

ಆರೋಪಿ ಃ ಪದ್ಮಮ್ಮ ಗಂಡ ವೆಂಕಟಯ್ಯ ಕಲಾಲ<br>
ವಃ 45 ವರ್ಷ, ಉಃ ಕೂಲಿ ಕೆಲಸ<br>
ಸಾಃ ಲಿಂಗಂಪಲ್ಲಿ , ತಾಃ ಸೇಡಂ , ಜಿಃ ಕಲಬುರಗಿ .

----

**ದೋಷಾರೋಪಣೆ**

ನಾನು ಶ್ರೀ ಬಾಲು, ಬಿ.ಎ.,ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 19-07-2019ರಂದು ಮಧ್ಯಾಹ್ನ 03.10 ಗಂಟೆ ಸುಮಾರಿಗೆ ಸೇಡಂ ಪೋಲೀಸ ಠಾಣೆಯ ವ್ಯಾಪ್ತಿಯಲ್ಲಿ ಬರುವ ಚಾಸಾ ನಂ 1, ಪಂಚರು ಮತ್ತು ಸಿಬ್ಬಂದಿ ಕೂಡಿಕೊಂಡು ಸೇಡಂ ತಾಲೂಕಿನ ಲಿಂಗಂಪಲ್ಲಿ ಗ್ರಾಮದ ಆರೋಪಿಗೆ ಸೇರಿದ ಮನೆಯ ಮುಂಬಾಗದಲ್ಲಿರುವ ಖಾಲಿ ಜಾಗದಲ್ಲಿ ಅಬಕಾರಿ ದಾಳಿ ಮಾಡಿದಾಗ ಸುಮಾರು 30 ಲೀ. ಕಲಬೇರಿಕೆ ಸೇಂದಿ ವಶಪಡಿಸಿಕೊಂಡು ಹಾಗೂ ಸದರಿ ಸೇಂದಿಯನ್ನು ರಸಾಯನಿಕ ಪರೀಕ್ಷೆಗೆ ಒಳಪಡಿಸಲಾಗಿ ಅದು ಈಥೈಲ್ ಅಲ್ಕೋಹಾಲ್ ಮತ್ತು ಕ್ಲೊರೊ ಹೈಡ್ರೇಟ್ ಕಂಡು ಬಂದಿದ್ದು ಗಸಿ ಹಾಗೂ ಘಾಟ ವಾಸನೆಯಿಂದ ಕೂಡಿದ್ದು ಮಾನವ ಸೇವನೆಗೆ ಯೋಗ್ಯವಲ್ಲದ ಸೇಂದಿ ಎಂದು ವರದಿ ಬಂದಿದ್ದು ಕಾರಣ ನೀನು ಭಾ. ದಂ. ಸಂಹಿತೆ ಕಲಂ 273 ಐ.ಪಿ.ಸಿ. ಮತ್ತು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32, 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 05-11-2024 ಪ್ರ.ದ.ನ್ಯಾ.ದಂ. ಸೇಡಂ.

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.20/2021**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಅಬಕಾರಿ ಪೊಲೀಸ್

-ಃಃ ವಿರುದ್ದ ಃಃ-

ಆರೋಪಿಃ- ಪದ್ಮಮ್ಮ ಗಂಡ ವೆಂಕಟಯ್ಯ ಕಲಾಲ
ವಃ 45 ವರ್ಷ, ಉಃ ಕೂಲಿ ಕೆಲಸ
ಸಾಃ ಲಿಂಗಂಪಲ್ಲಿ , ತಾಃ ಸೇಡಂ , ಜಿಃ ಕಲಬುರಗಿ .

**ಆರೋಪಿತರ ಹೇಳಿಕೆ**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ

ಪ್ರಃ-2) ನಿನ್ನ ತಪ್ಪನ್ನು ಒಪ್ಪಿಕೊಳ್ಳುತ್ತಿಯೊ ಅಥವಾ ವಿಚಾರಣೆ ನಡೆಯಬೇಕಾ?

ಉಃ-

(ದೋಷಾರೋಪಣೆಯನ್ನು ಆರೋಪಿತರಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕ 05-11-2024 ಪ್ರ.ದ.ನ್ಯಾ.ದಂ. ಸೇಡಂ.